# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 716(819)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳ ಕುರಿತು

(ಅ) ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳೇನು; ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ಮತ್ತು ಈ ಅಂಗಡಿಗಳು ಯಾರ ಹೆಸರಿನಲ್ಲಿ ತೆರೆಯಲಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ನ್ಯಾಯಬೆಲೆ ಅಂಗಡಿಯನ್ನು ಹೊಂದಿರುವವರು ಮರಣ ಹೊಂದಿದ್ದಲ್ಲಿ, ಅವರು ನಡೆಸುತ್ತಿರುವ ಅಂಗಡಿಯನ್ನು ಅವರ ವಾರಸುದಾರರಿಗೆ ನೀಡಲು ಅವಕಾಶವಿದೆಯೇ; (ಮಾಹಿತಿ ನೀಡುವುದು)

(ಇ) ನ್ಯಾಯಬೆಲೆ ಅಂಗಡಿಯ ಮಾಲೀಕರು ಸರ್ಕಾರ ನಿಗದಿಪಡಿಸಿರುವ ಪ್ರಮಾಣದ ದಿನಸಿ ಸಾಮಗ್ರಿಗಳನ್ನು ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್‌ದಾರರಿಗೆ ವಿತರಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ; (ಮಾಹಿತಿ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಪ್ರಮಾಣದ ದಿನಸಿ ಸಾಮಾಗ್ರಿಗಳನ್ನು ನೀಡದೆ ಅವ್ಯವಹಾರದಲ್ಲಿ ತೊಡಗಿರುವ ಪ್ರಕರಣಗಳು ಕಂಡುಬಂದಿವೆಯೇ; ಕಂಡುಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಅಂಗಡಿ ಮಾಲೀಕರ ವಿರುದ್ದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು)